ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಆಲೂಗೆಡ್ಡೆ ಬೆಳೆಗಾರರ ಸಮಸ್ಯೆ ನಿವಾರಣೆ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

169 (285) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯು ಆಲೂಗೆಡ್ಡೆ ಬೆಳೆಗೆ ಪ್ರಸಿದ್ಧವಾಗಿದ್ದು, ಇತ್ತೀಚಿನ ವರ್ಷಗಳಲ್ಲಿ ಉತ್ತಮ ಗುಣಮಟ್ಟದ ಆಲೂಗೆಡ್ಡೆ ಬಿತ್ತನೆ ಬೀಜಗಳು ದೊರಕದೆ ಜಿಲ್ಲೆಯ ಆಲೂಗೆಡ್ಡೆ ಬೆಳೆಗಾರರು ತುಂಬಾ ನಷ್ಟಕ್ಕೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಆಲೂಗೆಡ್ಡೆ ಬೆಳೆ ಹಾಳಾಗಿದೆ; ಬೆಳೆ ನಷ್ಟದ ಪ್ರಮಾಣವೆಷ್ಟು; ಬೆಳೆ ನಷ್ಟಕ್ಕೆ ಸರ್ಕಾರವು ನೀಡಿರುವ ಪರಿಹಾರವೆಷ್ಟು; (ಗ್ರಾಮವಾರು ಮಾಹಿತಿ ನೀಡುವುದು)

(ಇ) ಉತ್ತಮ ಗುಣಮಟ್ಟದ ಆಲೂಗೆಡ್ಡೆ ಬಿತ್ತನೆ ಬೀಜಗಳು ರೈತರಿಗೆ ದೊರಕುವಂತೆ ಮಾಡಲು ಮತ್ತು ಆಲೂಗೆಡ್ಡೆ ಬೆಳೆಗೆ ವೈಜ್ಞಾನಿಕವಾಗಿ ಬೆಲೆ ನಿಗದಿ ಮಾಡಲು ಹಾಗೂ ಸೂಕ್ತ ಬೆಂಬಲ ಬೆಲೆ ನಿಗದಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)